ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ    ದಿನಾಂಕ : DATE : 1-12-200

# ಸಂಪುಟ ಕುತೂಹಲ ದುಪ್ಪಟ್ಟು

ವಿ. ವಾ. 1-12-20

**ಬೆಂಗಳೂರು:** ಗ್ರಾಮ ಪಂಚಾಯಿತಿ ಚುನಾವಣೆ ಎದುರಿಗಿರುವಾಗಲೇ ಸಂಪುಟ ವಿಸ್ತರಣೆ ಸಾಧ್ಯತೆಯನ್ನೂ ತಳ್ಳಿ ಹಾಕುವಂತಿಲ್ಲ. ಸೋಮವಾರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಇನ್ನೆರಡು ದಿನ ಕಾದು ನೋಡಿ ಎಂದು ಚುಟುಕಾಗಿ ಹೇಳಿದ್ದಾರೆ. ಈ ಮೂಲಕ ಸದ್ಯಕ್ಕೆ ಸಂಪುಟ ವಿಸ್ತರಣೆ ನಡೆಯುವುದು ಅನುಮಾನ ಎಂಬ ಚರ್ಚೆಗೆ ತೆರೆ ಎಳೆದಿದ್ದಾರೆ. ಗ್ರಾಪಂ ಚುನಾವಣೆ ದಿನಾಂಕ ನಿಗದಿಯಾಗಿರುವ ಹಿನ್ನೆಲೆಯಲ್ಲಿ ಸಂಪುಟ ವಿಸ್ತರಣೆಗೆ ನೀತಿ ಸಂಹಿತೆ ಅಡ್ಡಿಯಾಗಲ್ಲ ಎಂಬ ಸಂಗತಿಯನ್ನೂ ಸರ್ಕಾರ ಖಚಿತ ಮಾಡಿಕೊಂಡಿದೆ. ಇದೇ ವಿಚಾರದಲ್ಲಿ ಚುನಾವಣೆ ಆಯೋಗ ಪ್ರತಿಕ್ರಿಯಿಸಿದ್ದು, ಈ ಚುನಾವಣೆ ಮೇಲೆ ಪ್ರಭಾವ ಬೀರುವ ತೀರ್ಮಾನ ಆಗಬಾರದೆಂಬ ನಿಯಮವಿದೆ. ಸಂಪುಟ ವಿಸ್ತರಣೆ ಈ ವ್ಯಾಪ್ತಿಗೆ ಬರುತ್ತದೋ ಇಲ್ಲವೋ ಎಂಬುದು ಈಗ ಹೇಳಲು ಬರುವುದಿಲ್ಲ. ಸರ್ಕಾರ ಪ್ರಸ್ತಾವನೆ ಇಟ್ಟಾಗ ಪರಿಶೀಲಿಸಿ ಅಭಿಪ್ರಾಯ ನೀಡಲಾಗುತ್ತದೆ ಎಂದಿದೆ.

**ಗ್ರಾಪಂ ಚುನಾವಣೆ ಘೋಷಣೆ ಹಿನ್ನೆಲೆ ನೀತಿ ಸಂಹಿತೆ ಜಾರಿಯಲ್ಲಿದ್ದು, ಸಹಜವಾಗಿಯೇ ಸಂಪುಟ ವಿಸ್ತರಣೆ ಮತ್ತಷ್ಟು ವಿಳಂಬವಾಗಲಿದೆ. ಸಚಿವಾಕಾಂಕ್ಷಿಗಳು ತಾಳ್ಮೆಯಿಂದ ಕಾಯಬೇಕು.**
**। ಭೈರತಿ ಬಸವರಾಜ**
**ನಗರಾಭಿವೃದ್ಧಿ ಸಚಿವ**

## ಸಿಎಂಗೆ ನಿರಾಳತೆ ತಂದ ಚುನಾವಣೆ

**ಬೆಂಗಳೂರು:** ಗ್ರಾಮ ಪಂಚಾಯಿತಿ ಚುನಾವಣೆ ಘೋಷಣೆಯಾಗುತ್ತಿದ್ದಂತೆ ಸಿಎಂ ಬಿ.ಎಸ್. ಯಡಿಯೂರಪ್ಪ ರಿಲ್ಯಾಕ್ಸ್ ಆಗಿದ್ದು, ಸಂಪುಟ ವಿಸ್ತರಣೆ ಒತ್ತಡದ ರಾಜಕಾರಣ ಬದಿಗೆ ಸರಿದಿದೆ. ಸಿಎಂ ಕುರ್ಚಿಯನ್ನೆ ಅಲುಗಾಡಿಸಲು ಪಕ್ಷದೊಳಗೆ ನಡೆಯುತ್ತಿದ್ದ ಷಡ್ಯಂತ್ರಗಳಿಗೆ ಸದ್ಯಕ್ಕೆ ಬ್ರೇಕ್ ಬಿದ್ದಿದ್ದು, ಈಗ ಎಲ್ಲರ ಚಿತ್ತ ಚುನಾವಣೆಯತ್ತ ನೆಟ್ಟಿದೆ. ದಿನದಿಂದ ದಿನಕ್ಕೆ ಬದಲಾಗುತ್ತಿದ್ದ ರಾಜಕೀಯ ಚಟುವಟಿಕೆಗಳಲ್ಲಿ ಮಗ್ನರಾಗಿದ್ದ ಶಾಸಕರು ಈಗ



ಕ್ಷೇತ್ರಗಳತ್ತ ಮುಖ ಮಾಡಿದ್ದಾರೆ. ಗ್ರಾಮೀಣ ಪ್ರದೇಶಗಳನ್ನು ಪ್ರತಿನಿಧಿಸುವ ವಿಧಾನಸಭಾ ಕ್ಷೇತ್ರಗಳ ಶಾಸಕರಿಗೆ ಮಾಡು ಇಲ್ಲವೇ ಮಡಿ ಎನ್ನುವ ಚುನಾವಣೆ ಇದಾಗಿದೆ. ಕ್ಷೇತ್ರದಲ್ಲಿ ರಾಜಕೀಯ ಹಿಡಿತ ಸಾಧಿಸಬೇಕು ಎಂದರೆ, ಅಲ್ಲಿ ಪಕ್ಷದ ಕಾರ್ಯಕರ್ತರು, ಬೆಂಬಲಿಗರನ್ನು ಅತಿ ಹೆಚ್ಚು ಸಂಖ್ಯೆಯಲ್ಲಿ ಗೆಲ್ಲಿಸಿಕೊಳ್ಳಲೇಬೇಕಾದ ಅನಿವಾರ್ಯತೆ ಇದೆ. ಈ ಎಲ್ಲ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಸಿಎಂ, ಇನ್ನೊಂದು ತಿಂಗಳು ಸಮಾಧಾನವಾಗಿರಲು ತಾನಾಗಿಯೇ ವೇದಿಕೆ ನಿರ್ಮಾಣಗೊಂಡಂತಾಗಿದೆ.